ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಿ.ಡಿ. ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ    ದಿನಾಂಕ : DATE : 6/3/21

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಸಂಬಂಧಿಸಿದ ಅಶ್ಲೀಲ ವಿಡಿಯೋ ಪ್ರಕರಣ

# ವಿಚಾರಣೆಗೆ ಸಹಕಾರ ನೀಡದ ದಿನೇಶ್ ಕಲ್ಲಹಳ್ಳಿ

ಬೆಂಗಳೂರು: ಮಾಜಿ ಸಚಿವ ರಮೇಶ್ ಜಾರಕಿಹೊಳಿಗೆ ಸಂಬಂಧಿಸಿದ ಅಶ್ಲೀಲ ವಿಡಿಯೋ ಸಂಬಂಧ ದೂರು ನೀಡಿದ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಇದುವರೆಗ ವಿಚಾರಣೆಗೆ ಸಂಪೂರ್ಣವಾಗಿ ಸಹಕಾರ ನೀಡುತ್ತಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ.



ಪೊಲೀಸ್ ಭದ್ರತೆ ನೀಡಿದರೆ ಮಾ.9ರಂದು ವಿಚಾರಣೆಗೆ ಬರುವುದಾಗಿ ಕಬ್ಬನ್ ಪಾರ್ಕ್ ಪೊಲೀಸರಿಗೆ ಪತ್ರ ಬರೆದಿದ್ದ ಮಾರುವಾರ, ಶುಕ್ರವಾರ ಮಧ್ಯಾಹ್ನ 1.30 ಗಂಟೆಗೆ ವಿಚಾರಣೆಗೆ ಹಾಜರಾದ ದಿನೇಶ್ ಕಲ್ಲಹಳ್ಳಿಯನ್ನು ಕಬ್ಬನ್ ಪಾರ್ಕ್ ಠಾಣೆಯ ಇನ್‌ಸ್ಪೆಕ್ಟರ್ ಬಿ.ಮಾರುತಿ, ಎಸಿಪಿ ಯತಿರಾಜ್, ಡಿಸಿಪಿ ಎಂ.ಎನ್.ಅನುಚೇತ್ ಅವರು ದಿನೇಶ್ ಅವರನ್ನು ಸಂಜೆ 5.30ರವರೆಗೆ ವಿಚಾರಣೆ ನಡೆಸಿದರು.

ಸತತ ಐದು ಗಂಟೆಗಳ ಕಾಲ ವಿಚಾರಣೆ ನಡೆಸಿದರೂ ದಿನೇಶ್ ಕಲ್ಲಹಳ್ಳಿ, ಸಂತ್ರಸ್ತೆ ಹಾಗೂ ಸಿಡಿ ನೀಡಿದ ವ್ಯಕ್ತಿ ಬಗ್ಗೆಯಾಗಲಿ ಯಾವುದೇ ಮಾಹಿತಿ ನೀಡಿಲ್ಲ. ಸಿಡಿ ನೀಡಿದವರು ಯಾರು? ಸಂತ್ರಸ್ತೆ ತಮ್ಮೊಂದಿಗೆ ಫೋನ್‌ನಲ್ಲಿ ಮಾತನಾಡಿದ್ದರಾ? ಎಲ್ಲಿ ಎಡಿಟ್ ಮಾಡಲಾಗಿದೆ? ಯುಟ್ಯೂಬ್‌ಗೆ ಅಪ್‌ಲೋಡ್ ಮಾಡಿದ್ದು ಯಾರು? ಎಂಬ ಮಾಹಿತಿಯನ್ನು ಆತ ಹೇಳುತ್ತಿಲ್ಲ.

> ಪ್ರಕರಣ ಸಂಬಂಧ ಈಗಾಗಲೇ ಕಬ್ಬನ್‌ಪಾರ್ಕ್ ಠಾಣೆ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ. ಆದರೆ, ಸಿಡಿ ಪ್ರಕರಣದಲ್ಲಿ ಕೆಲವೊಂದು ತಾಂತ್ರಿಕ ಸಮಸ್ಯೆಗಳಿವೆ. ಮುಂದೆ ಏನು ಮಾಡಬೇಕೆಂದು ಪರಿಶೀಲಿಸಲಾಗುತ್ತಿದೆ.
>
> – ಕಮಲ್ ಪಂತ್, ನಗರ ಪೊಲೀಸ ಆಯುಕ್ತ

ಗಾಂಧಿನಗರದ ಖಾಸಗಿ ಲಾಡ್ಜ್‌ನಲ್ಲಿಯೇ ಸಂತ್ರಸ್ತೆಯ ಕುಟುಂಬ ಸದಸ್ಯರು ಸಿಡಿ ಕೊಟ್ಟು ಹೋದರು. ಅನಂತರ ಅವರು ಸಂಪರ್ಕಕ್ಕೆ ಸಿಕ್ಕಿಲ್ಲ. ಅದನ್ನು ಎಲ್ಲಿ ಎಡಿಟ್ ಮಾಡಲಾಗಿದೆ ಎಂಬುದು ಗೊತ್ತಿಲ್ಲ. ಆಕೆಯ ಕುಟುಂಬ ಸದಸ್ಯರು ಕೊಟ್ಟ ಸಿಡಿಯನ್ನು ನೇರವಾಗಿ ಪೊಲೀಸರಿಗೆ ನೀಡಿದ್ದೇನೆ. ಇನ್ನು ಲಾಡ್ಜ್‌ನ ಸಿಸಿ ಕ್ಯಾಮರಾದಲ್ಲಿ ಏನೂ ಸೆರೆಯಾಗಿಲ್ಲ. ಅವರೂ ಅಲ್ಲಿಯೇ ಆ ವ್ಯಕ್ತಿ ಸಿಡಿ ನೀಡಿದ್ದಾನೆ ಎಂದು ಹೇಳಿಕೆ ನೀಡುತ್ತಿದ್ದೀಯಾ? ಎಂಬ ಪ್ರಶ್ನೆಗೆ ಉತ್ತರಿಸಿದ ದಿನೇಶ್ ಕಲ್ಲಹಳ್ಳಿ, ಅದೇ ಲಾಡ್ಜ್‌ನಲ್ಲಿಯೇ ಸಿಡಿ ಕೊಟ್ಟು ಹೋಗಿದ್ದಾನೆ. ಮತ್ತೊಂದು ಸಿಸಿ ಕ್ಯಾಮರಾ ದೃಶ್ಯವನ್ನು ಪರಿಶೀಲಿಸಿ ಎಂದು ತನಿಖಾಧಿಕಾರಿಗಳಿಗೆ ಹೇಳಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಹೀಗಾಗಿ ಸಂತ್ರಸ್ತೆಯ ಪತ್ತೆಗೆ ಪೊಲೀಸರ ತಂಡ ರಚಿಸಲಾಗಿದೆ. ಆಕೆ ಮೊಬೈಲ್ ನಂಬರ್ ಹಾಗೂ ಇತರ ಮಾಹಿತಿ ಪತ್ತೆಗಾಗಿ ಶೋಧ ನಡೆಸಲು ಸೂಚಿಸಲಾಗಿದೆ. ಈ ತಂಡ ಈಗಾಗಲೇ ಕಾರ್ಯಾಚರಣೆ ಆರಂಭಿಸಿದೆ ಎಂದು ಮೂಲಗಳು ತಿಳಿಸಿವೆ.

**ಎಚ್‌ಡಿಕೆ ಹೇಳಿಕೆಗೆ ಸ್ವಾಗತ:** ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ ಪ್ರತಿಕ್ರಿಯಿಸಿದ ದಿನೇಶ್ ಕಲ್ಲಹಳ್ಳಿ, ಕುಮಾರಸ್ವಾಮಿ ಅವರ ಹೇಳಿಕೆಯನ್ನು ಸ್ವಾಗತಿಸುತ್ತೇನೆ. ಬ್ಲ್ಯಾಕ್‌ಮೇಲ್ ಮಾಡುವವರನ್ನು ಬಂಧಿಸಲಿ. ನಾನು ಯಾರನ್ನು ಬ್ಲ್ಯಾಕ್‌ಮೇಲ್ ಮಾಡಿಲ್ಲ. ಸಂತ್ರಸ್ತೆಯ ಪರವಾಗಿ ದೂರು ನೀಡಿದ್ದೇನೆ. ಭದ್ರತೆ ಇಲ್ಲದಿದ್ದರೂ ತನಿಖೆಗೆ ಅಡ್ಡಿಯಾಗಬಾರದು ಎಂಬ ಕಾರಣಕ್ಕೆ ವಿಚಾರಣೆಗೆ ಹಾಜರಾಗಿದ್ದೇನೆ. ದೂರಿನಲ್ಲಿರುವ ಸತ್ಯಾಸತ್ಯತೆ ಬಗ್ಗೆ ತನಿಖೆ ನಡೆಸಲಿ ಎಂದರು.

## ಮದುವೆಗೆ ಹೋಗುತ್ತೇನೆ ಎಂದು ವಿಚಾರಣೆಗೆ ಬಂದ ಕಲ್ಲಹಳ್ಳಿ

ಗುರುವಾರವಷ್ಟೇ ಪೊಲೀಸ್ ಭದ್ರತೆ ನೀಡಿದರೆ ಮಾ.9ರಂದು ವಿಚಾರಣೆಗೆ ಬರುವುದಾಗಿ ಹೇಳಿದ್ದ ದಿನೇಶ್ ಕಲ್ಲಹಳ್ಳಿ, ಕನಕಪುರದ ತನ್ನ ಮನೆಯ ಬಳಿ ನೀಡಿದ್ದ ಪೊಲೀಸ್ ಭದ್ರತಾ ಸಿಬ್ಬಂದಿಗೆ ತಾನೂ ಬೆಂಗಳೂರಿನಲ್ಲಿರುವ ಸಂಬಂಧಿಕರ ಮದುವೆಗೆ ಹೋಗುವುದಾಗಿ ಸುಳ್ಳು ಹೇಳಿ ವಿಚಾರಣೆಗೆ ಹಾಜರಾಗಿದ್ದಾರೆ. ಮಧ್ಯಾಹ್ನ 2 ಗಂಟೆ ಸುಮಾರಿಗೆ ವಿಚಾರಣೆಗೆ ಹಾಜರಾಗಿದ್ದಾರೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಸಿಡಿ ಕೊಟ್ಟವರ ವಿರುದ್ಧವೇ ಕಾನೂನು ಹೋರಾಟ?

ಮಾಧ್ಯಮಕ್ಕೆ ಮಾಹಿತಿ ನೀಡಿದ ದಿನೇಶ್ ಕಲ್ಲಹಳ್ಳಿ, ಇದುವರೆಗೂ ಸಂತ್ರಸ್ತೆಯನ್ನು ಭೇಟಿಯಾಗಿಲ್ಲ. ಒಂದು ವೇಳೆ ಆಕೆ ಒತ್ತಡದಿಂದಲೇ ಲೈಂಗಿಕ ಕ್ರಿಯೆಯಲ್ಲಿ ತೊಡಗಿದ್ದೇನೆ ಎಂದು ಹೇಳಿದರೆ, ಆಗ ನನಗೆ ಸಿಡಿ ಕೊಟ್ಟವರ ವಿರುದ್ಧವೇ ಕಾನೂನು ಹೋರಾಟ ನಡೆಸುತ್ತೇನೆ ಎಂದು ಹೇಳಿಕೆ ನೀಡಿದ್ದಾರೆ.